# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಸದಸ್ಯರ ಹೆಸರು | : | ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 388 |
| ಉತ್ತರಿಸಬೇಕಾದ ದಿನಾಂಕ | : | 11.12.2020 |
| ಉತ್ತರಿಸಬೇಕಾದ ಸಚಿವರು | : | ಮಾನ್ಯ ಪಶುಸಂಗೋಪನೆ, ಹಜ್ ಹಾಗೂ ವಕ್ಫ್ ಸಚಿವರು. |

| ಕ್ರ.ಸಂ | ಪ್ರಶ್ನೆಗಳು | ಉತ್ತರಗಳು |
|---|---|---|
| ಅ | ಶಿವಮೊಗ್ಗ ಜಿಲ್ಲೆಯಲ್ಲಿರುವ ಪಶು ವೈದ್ಯಕೀಯ ಆಸ್ಪತ್ರೆಗಳ ಸಂಖ್ಯೆ ಎಷ್ಟು; ಈ ಪಶುವೈದ್ಯಕೀಯ ಆಸ್ಪತ್ರೆಗಳಲ್ಲಿ ಜೀವರಕ್ಷಕ ಔಷಧಗಳು ಹಾಗೂ ಚುಚ್ಚುಮದ್ದುಗಳು ದೊರೆಯುವುದಿಲ್ಲವೆಂದು ಫಲಕದಲ್ಲಿ ಪ್ರಕಟಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಶಿವಮೊಗ್ಗ ಜಿಲ್ಲೆಯಲ್ಲಿ ಒಟ್ಟು ವಿವಿಧ ಹಂತದ 165 ಪಶುವೈದ್ಯಕೀಯ ಸಂಸ್ಥೆಗಳು ಕಾರ್ಯನಿರ್ವಹಿಸುತ್ತಿವೆ. ಜೀವ ರಕ್ಷಕ ಔಷಧಿಗಳು ಮತ್ತು ಚುಚ್ಚು ಮದ್ದುಗಳು ದೊರೆಯುವುದಿಲ್ಲವೆಂದು ಜಿಲ್ಲೆಯ ಯಾವುದೇ ಪಶುವೈದ್ಯಕೀಯ ಸಂಸ್ಥೆಗಳ ಫಲಕದಲ್ಲಿ ಪ್ರಕಟಿಸಿರುವುದಿಲ್ಲ. |
| ಆ | ಹಾಗಿದ್ದಲ್ಲಿ, ಪಶುವೈದ್ಯಕೀಯ ಆಸ್ಪತ್ರೆಗಳಲ್ಲಿ ಜೀವ ರಕ್ಷಕ ಔಷಧಿ ಮತ್ತು ಚುಚ್ಚುಮದ್ದುಗಳನ್ನು ಸರಬರಾಜು ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮವೇನು? | ಈಗಾಗಲೇ ಪಶುವೈದ್ಯಕೀಯ ಸಂಸ್ಥೆಗಳಿಗೆ ಜೀವ ರಕ್ಷಕ ಔಷಧಿಗಳು ಮತ್ತು ಚುಚ್ಚುಮದ್ದುಗಳನ್ನು ಸರಬರಾಜು ಮಾಡಲಾಗಿದೆ. |

**ಪಸಂಮೀ ಇ-314 ಸಲೆವಿ 2020**

(ಪ್ರಭು ಬಿ. ಚವ್ಹಾಣ್)
ಪಶುಸಂಗೋಪನೆ, ಹಜ್ ಮತ್ತು ವಕ್ಫ್ ಸಚಿವರು,